# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1067 |
| 2 | ಸದಸ್ಯರ ಹೆಸರು | : | ಶ್ರೀ ವೈ ಎಂ. ಸತೀಶ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| 3 | ಉತ್ತರಿಸುವ ದಿನಾಂಕ | : | 14-12-2023 |
| 4 | ಉತ್ತರಿಸುವವರು | : | ಉಪ ಮುಖ್ಯಮಂತ್ರಿಗಳು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಬಿ.ಬಿ.ಎಂ.ಪಿ ಪೂರ್ವ ವಲಯದ ಆರೋಗ್ಯಾಧಿಕಾರಿಯೊಬ್ಬರು ತಮ್ಮ ಪುತ್ರನ ಹೆಸರಿನಲ್ಲಿ ಹಲವು ಕಾಮಗಾರಿಗಳ ಗುತ್ತಿಗೆ ಪಡೆದಿರುವ ಆರೋಪದ ಕುರಿತಂತೆ ಬಿ.ಬಿ.ಎಂ.ಪಿ ಅಧಿಕಾರಿ ಮತ್ತು ನೌಕರರ ಕ್ಷೇಮಾಭಿವೃದ್ಧಿ ಸಂಘದವರು ಅಂದಿನ ಮುಖ್ಯ ಆಯುಕ್ತರಿಗೆ ದೂರು ನೀಡಿರುವುದು ನಿಜವೇ; ಹಾಗಿದ್ದಲ್ಲಿ, ಕಾರಣವೇನು; ಪ್ರಕರಣದ ಪೂರ್ಣ ಮಾಹಿತಿ ನೀಡುವುದು; | ಹೌದು.<br>• ದೂರಿನ ಹಿನ್ನೆಲೆಯಲ್ಲಿ ವಿಶೇಷ ಆಯುಕ್ತರು (ಆರೋಗ್ಯ), ಬಿಬಿಎಂಪಿ ಇವರು ಮುಖ್ಯ ಅಭಿಯಂತರರು (ಟಿವಿಸಿಸಿ) ರವರಿಗೆ ತನಿಖೆ ನಡೆಸಲು ಟಿಪ್ಪಣಿ ಹಾಳೆಯಲ್ಲಿ ಆದೇಶಿಸಿರುತ್ತಾರೆ. ಪ್ರತ್ಯೇಕ ಆದೇಶ ಹೊರಡಿಸಿರುವುದಿಲ್ಲ.<br>• ಮುಖ್ಯ ಅಭಿಯಂತರರು (ಟಿ.ವಿ.ಸಿ.ಸಿ) ಪ್ರಕರಣಕ್ಕೆ ಸಂಬಂಧಿಸಿದ 28 ಕಡತಗಳನ್ನು ಪರಿಶೀಲಿಸಿ ತನಿಖೆ ನಡೆಸಿರುತ್ತಾರೆ.<br>• ವಾರ್ಡ್‌ವಾರು ಕೊಟೇಷನ್ ಮುಖಾಂತರ ಏಜೆನ್ಸಿ ನಿಯೋಜಿಸಿಕೊಂಡು, ಡಿಸೆಂಬರ್-2020 ರಿಂದ ಜುಲೈ-2021 ರವರೆಗೆ ಕಾರ್ಯನಿರ್ವಹಿಸಿರುವ ಬಗ್ಗೆ ಕಡತಗಳು ಲಭ್ಯವಿರುತ್ತವೆ. ಈ ಕಡತಗಳ ನಿರ್ವಹಣೆಯಲ್ಲಿ ನ್ಯೂನತೆಗಳು ಕಂಡುಬಂದಿವೆ.<br>• ಆರೋಗ್ಯಾಧಿಕಾರಿಗಳು, ಬೊಮ್ಮನಹಳ್ಳಿ ಇವರು ತಮ್ಮ ಮಗನ ಸಂಸ್ಥೆಗೆ ಗುತ್ತಿಗೆ ನೀಡಿರುವ ಬಗ್ಗೆ ತನಿಖೆಯಲ್ಲಿ ಕಂಡುಬಂದಿದೆ.<br>• ತನಿಖೆ ವರದಿಯನ್ವಯ ನ್ಯೂನ್ಯತೆಗಳ ಬಗ್ಗೆ ಸಮಜಾಯಿಷಿ ಸಲ್ಲಿಸುವಂತೆ ದಿನಾಂಕ:19-08-2023 ರಂದು ಆರೋಗ್ಯಾಧಿಕಾರಿಯವರಿಗೆ ಕಾರಣ ಕೇಳುವ ನೋಟೀಸನ್ನು ಜಾರಿಮಾಡಲಾಗಿರುತ್ತದೆ.<br>• ಸದರಿ ಆರೋಗ್ಯಾಧಿಕಾರಿಯವರು ಸಮಜಾಯಿಷಿಯನ್ನು ಸಲ್ಲಿಸಲು ಕಾಲಾವಕಾಶವನ್ನು ನೀಡುವಂತೆ ಕೋರಿರುತ್ತಾರೆ.<br>• ಇವರು 'ಎ' ವೃಂದದ ಅಧಿಕಾರಿಯಾಗಿರುವುದರಿಂದ ಸರ್ಕಾರಕ್ಕೆ ಶಿಸ್ತು ಕ್ರಮ ಪ್ರಸ್ತಾವನೆಯನ್ನು ಸಲ್ಲಿಸಲು ಬಿಬಿಎಂಪಿಯಲ್ಲಿ ಪರಿಶೀಲಿಸಲಾಗುತ್ತಿದೆ. |
| ಆ | ಈ ಕುರಿತಂತೆ ಮುಖ್ಯ ಆಯುಕ್ತರು ಟಿ.ವಿ.ಸಿ.ಸಿ ತನಿಖೆ ನಡೆಸಿ ವರದಿ ಸಲ್ಲಿಸುವಂತೆ ಆದೇಶ ಹೊರಡಿಸಲಾಗಿದೆಯೇ; ಹಾಗಿದ್ದಲ್ಲಿ ಆದೇಶದ ಪ್ರತಿಯನ್ನು ಒದಗಿಸುವುದು; | |
| ಇ | ಈ ಬಗ್ಗೆ ತನಿಖೆ ನಡೆದಿದ್ದಲ್ಲಿ, ತನಿಖೆ ಯಾವ ಹಂತದಲ್ಲಿದೆ ಹಾಗೂ ಇದರಲ್ಲಿ ತಪ್ಪಿತಸ್ಥರು ಯಾರು ಅವರ ಮೇಲೆ ಆದ ಕ್ರಮಗಳೇನು? (ಮಾಹಿತಿ ನೀಡುವುದು) | |

**ಸಂಖ್ಯೆ: ನಅಇ 193 ಬಿಬಿಎಲ್ 2023(ಇ)**

(ಡಿ.ಕೆ. ಶಿವಕುಮಾರ್)
ಉಪ ಮುಖ್ಯಮಂತ್ರಿ.